ಕರ್ನಾಟಕ ಸರ್ಕಾರ

ಸಂ:ಎಎಲ್‌ಎನ್ (ಎಜೆ) ಎಸ್‌ಆರ್ 28/2016–17

ಜಿಲ್ಲಾಧಿಕಾರಿಗಳ ಕಾರ್ಯಾಲಯ,
ಬೆಂಗಳೂರು ಜಿಲ್ಲೆ,
ಬೆಂಗಳೂರು, ದಿನಾಂಕ: 05–10–2016

## ಅಧಿಕೃತ ಜ್ಞಾಪನ

ವಿಷಯ:– ಬೆಂಗಳೂರು ಜಿಲ್ಲೆ, ಆನೇಕಲ್ ತಾಲ್ಲೂಕು, ಜಿಗಣಿ ಹೋಬಳಿ, ಕಲ್ಲುಬಾಳು ಗ್ರಾಮದ ಸರ್ವೆ ನಂ.69/3 ರಲ್ಲಿ 0–11 ಗುಂಟೆ ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕಾಗಿ ಭೂ ಪರಿವರ್ತನೆ ಕೋರಿ ಶ್ರೀಮತಿ ಪುಟ್ಟಮ್ಮ ಬಿನ್ ಲೇಟ್ ಗೋವಿಂದಪ್ಪ, ಕಲ್ಲುಬಾಳು ಗ್ರಾಮ, ಜಿಗಣಿ ಹೋಬಳಿ, ಆನೇಕಲ್ ತಾಲ್ಲೂಕು ರವರು ಸಲ್ಲಿಸಿರುವ ಅರ್ಜಿ ದಿನಾಂಕ:24-06-2016

ಉಲ್ಲೇಖ:–
1) ಸರ್ಕಾರದ ಸುತ್ತೋಲೆ ಸಂಖ್ಯೆಆರ್‌ಡಿ 7 ಎಲ್‌ಜಿಪಿ 95 ದಿನಾಂಕ: 7–6–1999.
2) ಸರ್ಕಾರದ ಸುತ್ತೋಲೆ ಸಂಖ್ಯೆಆರ್.ಡಿ:56:ಎಲ್‌ಜಿಪಿ 2008 ದಿನಾಂಕ:10–9–2008 ಮತ್ತು 24–9–2008.
3) ತಹಶೀಲ್ದಾರ್, ಆನೇಕಲ್ ತಾಲ್ಲೂಕು, ರವರ ಪತ್ರ ಸಂ: ಎಎಲ್‌ಎನ್(ಜೆ) ಸಿಆರ್ 49/2016–17 ದಿನಾಂಕ: 21–07–2016
4) ಭೂ ಪರಿವರ್ತನಾ ಶುಲ್ಕ ರೂ. 14,974–00 ಹಾಗೂ ಪೋಡಿ ಶುಲ್ಕ ರೂ.55–00 ಒಟ್ಟು ರೂ.15,029–00ಗಳನ್ನು ಚಲನ್ ನಂ.017 ದಿನಾಂಕ:23–09–2016 ರಂದು ಎಸ್.ಬಿ.ಎಂ.ಆನೇಕಲ್ ಬ್ರಾಂಚ್ ಗೆ ಅರ್ಜಿದಾರರು ಜಮಾ ಮಾಡಿರುತ್ತಾರೆ.
5) ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು ಹಾಗೂ ಸದಸ್ಯ-ಕಾರ್ಯದರ್ಶಿ, ಆನೇಕಲ್ ಯೋಜನಾ ಪ್ರಾಧಿಕಾರ, ಆನೇಕಲ್ ರವರ ಪತ್ರ ಸಂ. ಆಯೋಪ್ರಾ/ಭೂ.ಪ.ಅ/207/2016–17 ದಿನಾಂಕ:04–08–2016 ಮತ್ತು ವಿಶೇಷ ಭೂ ಸ್ವಾಧೀನಾಧಿಕಾರಿಗಳು, ಕರ್ನಾಟಕ ಗೃಹ ಮಂಡಳಿ, ಬೆಂಗಳೂರು ರವರ ಪತ್ರ ಸಂ. ಕಗೃಮಂ ಭೂಸ್ವಾವಿ/232/2016–17 ದಿನಾಂಕ:08–08–2016.

***

ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ರ ಕಲಂ 95(2), 95(4) ಮತ್ತು 95(7) ರ ಷರತ್ತುಗಳು, ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ನಿಯಮಗಳು 1994 ರ ನಿಯಮ 107(1) ಹಾಗೂ ಷರತ್ತುಗಳಿಗೊಳಪಡಿಸಿ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ನಿಯಮಗಳು 1994 ರ ನಿಯಮ 107(1) ಗಳಂತೆ ಅರ್ಜಿದಾರರು ರಂತೆ ಎಕರೆ ಒಂದಕ್ಕೆ ರೂ.54,450/– (ಐವತ್ನಾಲ್ಕು ಸಾವಿರದ ನಾಲ್ಕು ನೂರಾ ಐವತ್ತು ಮಾತ್ರ ) ಗಳಂತೆ ಅರ್ಜಿದಾರರು ಉಲ್ಲೇಖ(4)ರಲ್ಲಿ ನಮೂದಿಸಿರುವಂತೆ ಹಣವನ್ನು ಜಮಾ ಮಾಡಿದ ಶ್ರೀಮತಿ ಪುಟ್ಟಮ್ಮ ಬಿನ್ ಲೇಟ್ ಗೋವಿಂದಪ್ಪ ಕಲ್ಲುಬಾಳು ಗ್ರಾಮ, ಜಿಗಣಿ ಹೋಬಳಿ, ಆನೇಕಲ್ ತಾಲ್ಲೂಕು ರವರ ಅರ್ಜಿಯನ್ನು ಪರಿಗಣಿಸಿ, ಬೆಂಗಳೂರು ಜಿಲ್ಲೆ ಆನೇಕಲ್ ತಾಲ್ಲೂಕು, ಜಿಗಣಿ ಹೋಬಳಿ, ಕಲ್ಲುಬಾಳು ಗ್ರಾಮದ ಸರ್ವೆ ನಂ.69/3 ರಲ್ಲಿ 0–11 ಗುಂಟೆ ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕಾಗಿ ಬಳಸಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಭೂ ಪರಿವರ್ತನಾ ಆದೇಶವನ್ನು ಹೊರಡಿಸಲಾಗಿದೆ.

1. ಈ ಭೂಮಿಯು ಯಾವ ಉದ್ದೇಶಕ್ಕಾಗಿ ಪರಿವರ್ತನೆಯಾಗಿದೆಯೋ ಆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಲು ಸಕ್ಷಮ ಪ್ರಾಧಿಕಾರದಿಂದ ಅಂದರೆ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ)/ಬಿ.ಎಂ.ಆರ್.ಡಿ.ಎ.(ಸ್ಥಳೀಯ ಯೋಜನಾ ಪ್ರಾಧಿಕಾರ/ ಬಿ.ಎಂ.ಐ.ಸಿ.ಎ.ಪಿ.ಎ/ ಮಾಲಿನ್ಯ ನಿಯಂತ್ರಣಾ ಮಂಡಳಿ ರವರಿಂದ ಮಂಜೂರಾತಿಯನ್ನು ಪಡೆಯದ ಹೊರತು ಈ

Scanned by CamScanner

3. ಈ ಜಮೀನಿನಲ್ಲಿ ಉದ್ದೇಶಿಸಿರುವ ಬಡಾವಣೆ ನಕ್ಷೆ ಹಾಗೂ ಪರವಾನಗಿ ಇತ್ಯಾದಿಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿ.ಎಂ.ಆರ್.ಡಿ.ಎ.(ಸ್ಥಳೀಯ ಯೋಜನಾ ಪ್ರಾಧಿಕಾರ/ ಬಿ.ಎಂ.ಐ.ಸಿ.ಎ.ಪಿ.ಎ/ ಪ್ರಾಧಿಕಾರದಿಂದ ಅನುಮೋದಿಸಿಕೊಂಡು ಆ ನಂತರ ಅನುಮೋದನೆಗೊಂಡ ನಕ್ಷೆಗೆ ಅನುಗುಣವಾಗಿ ಕಟ್ಟಡವನ್ನು ಕಟ್ಟುವುದು. ಸದರಿ ಜಮೀನಿನಲ್ಲಿ ಲೇಔಟ್/ ಕಟ್ಟಡ ನಕ್ಷೆಗೆ ಅನುಮೋದನೆ ಪಡೆಯದೆ ಪರಭಾರೆ ಮಾಡಕೂಡದು.

4. ಭೂಪರಿವರ್ತನೆ ಕೋರಿರುವ ಜಮೀನಿನಲ್ಲಿ ಮೂಲಭೂತ ಸೌಕರ್ಯಗಳಿಗೆ ನಿಗಧಿಪಡಿಸಲಾದ ಅಂದರೆ ರಸ್ತೆ ಜಾಗ, ರಸ್ತೆ ಮಾರ್ಜಿನ್, ಉದ್ಯಾನವನ, ದೇವಸ್ಥಾನ, ಸಿ.ಎ ನಿವೇಶನ ಖಾಲಿ ಜಾಗ, ಇತ್ಯಾದಿಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿ.ಎಂ.ಆರ್.ಡಿ.ಎ.(ಸ್ಥಳೀಯ ಯೋಜನಾ ಪ್ರಾಧಿಕಾರ)/ ಬಿ.ಎಂ.ಐ.ಸಿ.ಎ.ಪಿ.ಎ/ ಪ್ರಾಧಿಕಾರದಿಂದ ಅನುಮೋದಿಸಿದ ಬಡಾವಣೆ ನಕ್ಷೆ ಪ್ರಕಾರ ಹಾಗೂ ನಿರ್ದಿಷ್ಟಪಡಿಸಿದ ನಿಯಮಗಳ ರೀತ್ಯಾ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸಿ ಸಕ್ಷಮ ಪ್ರಾಧಿಕಾರಗಳಿಗೆ ಪರಿತ್ಯಾಗ ಪತ್ರ (Relinquish Deed) ಮಾಡಿಕೊಡತಕ್ಕದ್ದು. ಹಾಗೂ ಸ್ಥಳೀಯ ಯೋಜನಾ ಪ್ರಾಧಿಕಾರ ವಿಧಿಸಿರುವ ಷರತ್ತುಗಳಿಗೊಳಪಟ್ಟಿರುತ್ತದೆ.

5. ಸಂಬಂಧಪಟ್ಟ ಪ್ರಾಧಿಕಾರದಿಂದ ಅನುಮೋದಿತ ನಕ್ಷೆ ಪಡೆಯದೆ ನಿವೇಶನಗಳನ್ನು/ಕಟ್ಟಡಗಳನ್ನು ನೊಂದಣಾಧಿಕಾರಿಗಳಿಂದ ಉಪನೊಂದಣಾಧಿಕಾರಿಗಳಿಂದ ನೊಂದಾವಣೆ ಮಾಡತಕ್ಕದ್ದಲ್ಲ, ಖಾತೆದಾರರು ಒಂದು ವೇಳೆ ಭೂ ಪರಿವರ್ತನೆ ಮಂಜೂರು ಮಾಡಿರುವ ಜಮೀನಿನ ಪೂರ್ಣ ವಿಸ್ತೀರ್ಣವನ್ನು ಮಾರಾಟ ಮಾಡಲು ಉದ್ದೇಶಿಸಿದಲ್ಲಿ ಆದೇಶದ ಅಡ್ಡಿ ಬರುವುದಿಲ್ಲ.

6. ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ಜಮೀನಿನಲ್ಲಿ ನಿವೇಶನದಾರರಿಗೆ ನಾಗರೀಕ ಸೌಲಭ್ಯಗಳಾದ ವಿದ್ಯುಚ್ಛಕ್ತಿ, ರಸ್ತೆ, ಕುಡಿಯುವ ನೀರು, ಒಳಚರಂಡಿ ವ್ಯವಸ್ಥೆ ಇತ್ಯಾದಿಗಳನ್ನು ಆರೋಗ್ಯ ನೈರ್ಮಲೀಕರಣ ಹಾಗೂ ಭದ್ರತೆಗಳ ಉದ್ದೇಶದಿಂದ ಎಲ್ಲಾ ಸೌಲಭ್ಯಗಳನ್ನು ಕಾನೂನು ರೀತ್ಯ ಒದಗಿಸಿಕೊಡುವುದು ಅರ್ಜಿದಾರರ ಜವಾಬ್ದಾರಿಯಾಗಿರುತ್ತದೆ.

7. ಈ ಜಮೀನಿಗೆ ತಾಕು ಘೂಟು ಖರಾಬು ಜಮೀನು ಇದ್ದಲ್ಲಿ, ಕರ್ನಾಟಕ ಭೂ ಕಂದಾಯ ಕಾಯಿದೆ 1964 ರ ಕಲಂ 67 ರಂತೆ ಸಾರ್ವಜನಿಕ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು. ತಹಶೀಲ್ದಾರರವರು ಈ ಬಾಬ್ತು ಆರ್.ಟಿ.ಸಿ.ಯಲ್ಲಿ ಸ್ಪಷ್ಟವಾಗಿ ನಮೂದಿಸತಕ್ಕದ್ದು.

8. ಸರ್ಕಾರದ ಆದೇಶ ಸಂಖ್ಯೆ ಪಿಡಬ್ಲ್ಯುಡಿ 7556-665 ಆರ್ ಮತ್ತು ಬಿ-6-54-5 ಮತ್ತು ಕೇಂದ್ರ ಸರ್ಕಾರದ ಸಾರಿಗೆ ಇಲಾಖೆಯ ಪತ್ರದ ನಂ. ಪಿ.1/7(11)67, ದಿನಾಂಕ: 01-01-1966 ರಂತೆ ಸರ್ಕಾರವು ಕಾಲಕಾಲಕ್ಕೆ ನೀಡುವ ಆದೇಶದಂತೆ ಈ ಜಮೀನಿನಲ್ಲಿ ಕಟ್ಟಲು ಉದ್ದೇಶಿಸಿರುವ ಕಟ್ಟಡವು ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 40 ಮೀಟರ್‌ಗಳ ಅಂತರವನ್ನು ಮತ್ತು ಜಿಲ್ಲಾ ಹೆದ್ದಾರಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 25 ಮೀಟರ್‌ಗಳ ಅಂತರವನ್ನು ಕಾಯ್ದಿರಿಸಬೇಕು ಹಾಗೂ ಈ ಖಾಲಿ ಪ್ರದೇಶದಲ್ಲಿ ಯಾವುದೇ ಕಟ್ಟಡವನ್ನು ಕಟ್ಟಬಾರದು.

9. ಈ ಭೂ ಪರಿವರ್ತನಾ ಜಮೀನಿನಲ್ಲಿ ಸ್ಥಾಪಿಸಲಾಗುವ ಕೈಗಾರಿಕಾ ಘಟಕಗಳು ಹೊರದೂಡುವ ಹೊಗೆ, ಅನಿಲ, ಇತರೆ ಕಲ್ಮಶಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಿ ಸಾರ್ವಜನಿಕರ ಆರೋಗ್ಯಕ್ಕೆ ಯಾವುದೇ ರೀತಿಯ ಹಾನಿಯಾಗದಂತೆ ಹಾಗೂ ಪರಿಸರ ಮಾಲಿನ್ಯವಾಗದಂತೆ ನೋಡಿಕೊಳ್ಳತಕ್ಕದ್ದು. ಕೈಗಾರಿಕಾ ಉದ್ದೇಶಕ್ಕಾಗಿ ಭೂ ಪರಿವರ್ತಿತ ಜಮೀನಿನಲ್ಲಿ ಸ್ಥಾಪಿಸುವ ಕೈಗಾರಿಕಾ ಘಟಕಗಳು ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ಹಾಗೂ ಪರಿಸರ ಇಲಾಖೆಗೆ ಅನುಮತಿ ಹೊಂದಿರತಕ್ಕದ್ದು.

10. ಈ ಆದೇಶವು ಸದರಿ ಜಮೀನಿಗೆ ಸಂಬಂಧಪಟ್ಟಂತೆ ಯಾವುದೇ ನ್ಯಾಯಾಲಯದಲ್ಲಿನ ದಾವೆ / ರಿಟ್ ಅರ್ಜಿ/ ಮೇಲ್ಮನವಿಯ ತೀರ್ಪಿಗೆ ಒಳಪಟ್ಟಿರುತ್ತದೆ.

11. ಪ್ರಸ್ತಾವಿತ ಜಮೀನಿನ ಬಗ್ಗೆ ಯಾವುದೇ ಭೂಸ್ವಾಧೀನ ಪ್ರಕ್ರಿಯೆಗೆ ಒಳಪಟ್ಟಿದ್ದಲ್ಲಿ ಈ ಪ್ರಾಧಿಕಾರವು ಜವಾಬ್ದಾರಿಯಾಗುವುದಿಲ್ಲ.

12. ಪ್ರಶ್ನಿತ ಜಮೀನು ಸರ್ಕಾರಿ ಜಮೀನು ವ್ಯಾಪ್ತಿಗೆ ಒಳಪಟ್ಟಿದ್ದಲ್ಲಿ ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಕಲಂ 136(3) ರ ಅಡಿ ವಿಚಾರಣೆ ನಡೆಸಿ ಹೊರಡಿಸುವ ತೀರ್ಮಾನಕ್ಕೆ ಒಳಪಟ್ಟಿರುತ್ತದೆ.

13. ಪರಿಷ್ಕೃತ ಮಾಸ್ಟರ್ ಪ್ಲಾನ್ -2015 ರಲ್ಲಿ ಸೂಕ್ಷ್ಮ ವಲಯ (Sensitive Zone) ನಲ್ಲಿ ಬರುವ ಪ್ರದೇಶಗಳಿಗೆ ಸಂಬಂಧಪಟ್ಟ ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೇ ಉದ್ದೇಶಿತ ಭಾಗದಲ್ಲಿ ಯಾವುದೇ ರೀತಿಯ ಅಭಿವೃದ್ಧಿಯನ್ನು ಕೈಗೊಳ್ಳಬಾರದು.

14. ಉದ್ದೇಶಿತ ಜಾಗದಲ್ಲಿ ಯಾವುದೇ ರೀತಿಯ ಅಭಿವೃದ್ಧಿ ಚಟುವಟಿಕೆಗಳನ್ನು ಕೈಗೊಳ್ಳಬೇಕಾದಲ್ಲಿ ಪ್ರಾಧಿಕಾರದಿಂದ ರಚಿತವಾದ ಉಪ ಸಮಿತಿಯ ನಿರ್ಣಯದಂತೆ ನಕ್ಷೆಗಳನ್ನು ಅನುಮೋದಿಸಿಕೊಳ್ಳತಕ್ಕದ್ದು.

15. ಪ್ರಶ್ನಿತ ಜಮೀನು ಸರ್ಕಾರದಿಂದ ಮಂಜೂರಾದ ಯಾವುದೇ ಸರ್ಕಾರಿ ಜಮೀನಾಗಿದ್ದಲ್ಲಿ ಪಕ್ಕಾ ಪೋಡಿಯಾಗದ ಮತ್ತು ಪಕ್ಕಾ ಪೋಡಿ ಮಾಡಿಸಿಕೊಳ್ಳದೇ ತಪ್ಪು ಮಾಹಿತಿ ನೀಡಿ ಭೂ ಪರಿವರ್ತನೆ ಆದೇಶ ಪಡೆದಿದ್ದು ಕಂಡುಬಂದಲ್ಲಿ ಸದರಿ ಆದೇಶವನ್ನು ರದ್ದುಗೊಳಿಸಲಾಗುವುದು.

Scanned by CamScanner

16. ಅರ್ಜಿದಾರರು ಯಾವುದೇ ಸತ್ಯಾಂಶಗಳನ್ನು ಮರೆ ಮಾಚಿ, ಅನಧಿಕೃತ ದಾಖಲೆಗಳ ಮೇಲೆ ಈ ಅಧಿಕೃತ ಜ್ಞಾಪನ ಪಡೆದಿರುವುದು ಸ್ಪಷ್ಟಪಟ್ಟಲ್ಲಿ ತನ್‌ತಾನೇ ರದ್ದುಗೊಳ್ಳುತ್ತದೆ ಹಾಗೂ ಇದರಿಂದ ಅರ್ಜಿದಾರರಿಗಾಗಲೀ ಅಥವಾ ಅವರ ಉತ್ತರಾಧಿಕಾರಿಗಳಿಗಾಗಲೀ, ಆಗುವ ಯಾವುದೇ ಲುಕ್ಸಾನಿಗೆ ಸರ್ಕಾರವಾಗಲೀ ಅಥವಾ ಈ ಪ್ರಾಧಿಕಾರವಾಗಲೀ ಯಾವುದೇ ರೀತಿಯ ಜವಾಬ್ದಾರರಾಗಿರುವುದಿಲ್ಲ. ಇದರ ಪೂರ್ಣ ಹೊಣೆಗಾರಿಕೆ ಅರ್ಜಿದಾರರದ್ದೇ ಆಗಿರುತ್ತದೆ.

17. ಮೇಲ್ಕಂಡ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಈ ಭೂ ಪರಿವರ್ತನೆ ಆದೇಶವನ್ನು ಯಾವುದೇ ಸೂಚನೆ ನೀಡದೇ ರದ್ದುಗೊಳಿಸಲಾಗುವುದು ಮತ್ತು ಕರ್ನಾಟಕ ಭೂ ಕಂದಾಯ ಕಾಯಿದೆ 1964 ರ ಕಲಂ 96 ರಂತೆ ದಂಡ ಶುಲ್ಕವನ್ನು ವಿಧಿಸಲು ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು. ಅಲ್ಲದೇ ಈ ಜಮೀನಿನಲ್ಲಿ ಅನಧಿಕೃತವಾಗಿ ಕಟ್ಟಿದ ಕಟ್ಟಡಗಳನ್ನು ಯಾವುದೇ ಪರಿಹಾರ ನೀಡದೇ ಕೆಡವಲು ಕ್ರಮ ತೆಗೆದುಕೊಳ್ಳಲಾಗುವುದು. ಹಾಗೂ ಅದಕ್ಕೆ ತಗಲುವ ವೆಚ್ಚವನ್ನು ಭೂ ಕಂದಾಯ ಬಾಕಿ ಎಂದು ಖಾತೆದಾರರಿಂದ ವಸೂಲಿ ಮಾಡಲಾಗುವುದು.

18. ಉಲ್ಲೇಖ(5) ರಲ್ಲಿನ ಆನೇಕಲ್ ಯೋಜನಾ ಪ್ರಾಧಿಕಾರದ ಪತ್ರ ದಿನಾಂಕ:04-08-2016ರ ಷರತ್ತಿಗೊಳಪಟ್ಟಿರುತ್ತದೆ.

19. ಈ ಆದೇಶವು ರಾಷ್ಟ್ರೀಯ ಹಸಿರು ನ್ಯಾಯ ಮಂಡಳಿಯ ಮೂಲ ಅರ್ಜಿ ಸಂ.222/2014 ದಿನಾಂಕ:04-05-2016 ರಂತೆ ಕೆರೆ, ಪ್ರೈಮರಿ, ಸೆಕೆಂಡರಿ, ಟರ್ಷರಿ ಡ್ರೈನ್‌ಗಳಿದ್ದಲ್ಲಿ ನಿಗಧಿತ ಬಫರ್ ಬಿಡುವ ಷರತ್ತಿಗೆ ಹಾಗೂ ಸದರಿ ಪ್ರದೇಶದಲ್ಲಿ ಅಭಿವೃದ್ಧಿ ಚಟುವಟಿಕೆಗಳು ಬರಬಾರದೆಂಬ ಷರತ್ತಿಗೆ ಒಳಪಟ್ಟಿರುತ್ತದೆ.

ಷೆಡ್ಯೂಲ್ ವಿವರ

ಬೆಂಗಳೂರು ಜಿಲ್ಲೆ ಆನೇಕಲ್ ತಾಲ್ಲೂಕು, ಜಿಗಣಿ ಹೋಬಳಿ, ಕಲ್ಲುಬಾಳು ಗ್ರಾಮದ ಸರ್ವೆ ನಂ.69/3 ರಲ್ಲಿ 0-11 ಗುಂಟೆ ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕಾಗಿ ಭೂ ಪರಿವರ್ತಿತ ಜಮೀನಿನ ಚಕ್ಕುಬಂದಿ:

| ಸ.ನಂ. | ವಿಸ್ತೀರ್ಣ | ಪೂರ್ವ | ಪಶ್ಚಿಮ | ಉತ್ತರ | ದಕ್ಷಿಣ |
|---|---|---|---|---|---|
| 69/3 | 0-11 | ಸ.ನಂ.69/2ರ ಜಮೀನು | ಮಹಾಂತಲಿಂಗಾಪುರ ಗಡಿ | ಸ.ನಂ.69/3ರ ಉಳಿಕೆ ಜಮೀನು | ಸ.ನಂ.69/3ರ ಉಳಿಕೆ ಜಮೀನು |

ಸಹಿ/-
(ವಿ. ಶಂಕರ್),
ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.

ಪ್ರತಿಯನ್ನು ಮುಂದಿನ ಸೂಕ್ತ ಕ್ರಮಕ್ಕಾಗಿ ಕೆಳಕಂಡವರಿಗೆ ಕಳುಹಿಸಲಾಗಿದೆ.

1) ತಹಶೀಲ್ದಾರರು, ಆನೇಕಲ್ ತಾಲ್ಲೂಕು, ಆನೇಕಲ್ ರವರಿಗೆ ಮೂಲ ಕಡತ ಹಾಗೂ ಚಲನ್‌ದೊಂದಿಗೆ ಕಳುಹಿಸುತ್ತಾ ಈ ಆದೇಶದ ಪ್ರಕಾರ ಸಂಬಂಧಪಟ್ಟ ಸರ್ವೆ ನಂ. ಭೂ ಪರಿವರ್ತನೆಯಾಗಿದೆ ಎಂದು ಗಣಕೀಕೃತ ಆರ್.ಟಿ.ಸಿ.ಯಲ್ಲಿ ಕೂಡಲೇ ನಮೂದಿಸತಕ್ಕದ್ದು. ಮತ್ತು ಈ ಜಮೀನಿಗೆ ಖಾತೆದಾರರ ಲೆಕ್ಕದಲ್ಲಿ ಸದರಿ ಜಮೀನಿನ ಭೂ ಕಂದಾಯವನ್ನು ಕಡಿತಗೊಳಿಸತಕ್ಕದ್ದು.
2) ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು ಹಾಗೂ ಸದಸ್ಯ- ಕಾರ್ಯದರ್ಶಿ, ಆನೇಕಲ್ ಯೋಜನಾ ಪ್ರಾಧಿಕಾರ, ಆನೇಕಲ್ ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
3) ಉಪವಿಭಾಗಾಧಿಕಾರಿಗಳು, ಬೆಂಗಳೂರು ದಕ್ಷಿಣ ಉಪವಿಭಾಗ, ಬೆಂಗಳೂರು.
4) ಉಪನಿರ್ದೇಶಕರು, ಭೂ ಮಾಪನ ಮತ್ತು ಭೂ ದಾಖಲೆಗಳ ಇಲಾಖೆ, ಬೆಂಗಳೂರು ಉಪವಿಭಾಗ, ಬೆಂಗಳೂರು ಇವರಿಗೆ ಆರ್.ಟಿ.ಸಿ ಹಾಗೂ ನಕ್ಷೆಯ ಪ್ರತಿಯೊಂದಿಗೆ ಕಳುಹಿಸುತ್ತಾ ಭೂ ಪರಿವರ್ತನಾ ಪೋಡಿ ಕಾರ್ಯವನ್ನು ಜರೂರಾಗಿ ಪೂರೈಸಲು ಸೂಚಿಸಿದೆ.
5) ಉಪ ನೋಂದಣಾಧಿಕಾರಿಗಳು, ಜಿಗಣಿ ಹೋಬಳಿ, ಆನೇಕಲ್ ತಾಲ್ಲೂಕು, ಬೆಂಗಳೂರು ಇವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
6) ಶ್ರೀಮತಿ ಪಟ್ಟಮ್ಮ ಬಿನ್ ಲೇಟ್ ಗೋವಿಂದಪ್ಪ, ಕಲ್ಲುಬಾಳು ಗ್ರಾಮ, ಜಿಗಣಿ ಹೋಬಳಿ, ಆನೇಕಲ್ ತಾಲ್ಲೂಕು ರವರಿಗೆ ದೃಢೀಕೃತ ಅಂಚೆ ಮೂಲಕ ಕಳುಹಿಸಲಾಗಿದೆ.
7) ಹೆಚ್ಚಿನ ಪ್ರತಿ.

ಜಿಲ್ಲಾಧಿಕಾರಿಗಳು,